<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ</u>

**<u>ಸಿಸಿ ನಂ.217/2019</u>**

ಚಾಸಾ-3 ಫ್ರಾಸಾ-2

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣೀಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 13-03-2026

| | | |
|---|---|---|
| ಹೆಸರು | : | ಸೊಂದಪ್ಪ |
| ತಂದೆಯ ಹೆಸರು | : | ಪರಮೇಶ್ವರ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ಕೂಲಿಕೆಲಸ |
| ವಾಸಸ್ಥಳ | : | ಅಫಜಲಪುಾರ |

-: <u>ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-</u>

ಚಾಸಾ 2 ರವರ ಪರಿಚಯ ಇರುತ್ತದೆ.

ಸಾಕ್ಷಿಗೆ ಜಪ್ತಿ ಪಂಚನಾಮೆಯ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-**1** ಎಂದು ಗುರುತಿಸಲಾಗಿದ್ದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**1**(ಬಿ) ಎಂದು ಗುರುತಿಸಲಾಯಿತು.

ನಾನು ಒಂದು ದಿನ ಪೋಲಿಸ ಠಾಣೆ ಕಡೆ ಹೋದಾಗ ಪೋಲಿಸರು ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ. ನನಗೆ ಈ ಪ್ರಕರಣದ ಕುರಿತು ಯಾವುದೇ ಮಾಹಿತಿ ಇಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿನಾಂಕಃ 02.08.2017 ರಂದು ಬೆಳಿಗ್ಗೆ 11.15 ಕ್ಕೆ ಚಾಸಾ 1 ರವರು ನನಗೆ ಮತ್ತು ಚಾಸಾ 2 ರವರಿಗೆ ಕರೆಯಿಸಿ ತಮಗೆ ಬಂದ ಭಾತ್ಮಿ ತಿಳಿಸಿ ಶಿವಪೂರಕ್ಕೆ ದಾಳಿ ಹೋಗುವುದಿದೆ ಎಂದು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಆನಂತರ ನಾನು ಚಾಸಾ 1, 2 ರವರು ಬನ್ನಟ್ಟಿ ಗ್ರಾಮಕ್ಕೆ ಹೋಗಿರುತ್ತೇವೆ ಎಂದರೆ ಸರಿಯಲ್ಲ. ಆಗ ಬನಹಟ್ಟಿ ಕ್ರಾಸ ಹತ್ತಿರ 3 ಟ್ರ್ಯಾಕ್ಟರಗಳನ್ನು ನನ್ನ ಹಾಗೂ ಚಾಸಾ 2 ರವರ ಸಮಕ್ಷಮ ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿತರ ಪರ ಶ್ರೀ **MSP** ಮತ್ತು **MSD** ವಕೀಲರಿಂದಃ-</u>

ಪಾಟೀಸವಾಲು ಇಲ್ಲ ಎಂದು ನುಡಿಯುತ್ತಾರೆ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ